॥ ಚಿರಂಜೀವಿಯಾಗಿರೆಲೊ ॥

ಚಿರಂಜೀವಿಯಾಗಿರೆಲೊ ಚಿಣ್ಣ ನೀನು ॥ ಪ ॥
ಪರಮ ಭಾಗವತರ ಪದಧೂಳಿ ಧರಿಸುತಲಿ ॥ ಅ ಪ ॥

ಜರಿಯಬೇಡ ಹರಿಯ ಮರೆಯಬೇಡೆಂದೆಂದು
ತಿರಿಯಬೇಡ ಖಳರ ಮನೆಗೆ ಪೋಗಿ
ಜರೆಯಬೇಡನ್ಯರಿಗೆ ರಹಸ್ಯ ತತ್ತ್ವಗಳನ್ನು
ಬೆರೆಯಬೇಡ ಪರರ ಸತಿಯ ಸ್ವಪ್ನದಲೂ ॥ ೧ ॥

ಲೋಕವಾರ್ತೆಯ ನಿನ್ನ ಕಿವಿಗೆ ಕೇಳಿಸಬೇಡ
ಶ್ರೀ ಕಾಂತ ಚರಿತೆಯನು ಕೇಳದಿರಬೇಡ
ಪಾಕವನು ಮಾಡಿ ಏಕಾಂಗಿಯಾಗುಣಬೇಡ
ಭೂಕಾಂತರನುಸರಿಸಿ ಬೆಸಗೊಳ್ಳಬೇಡ ॥ ೨ ॥

ಸಾಲ ಮಾಡಲಿ ಬೇಡ ಸಾಲದೆಂದೆನಬೇಡ
ನಾಳೆಗೆ ಹ್ಯಾಗೆಂಬ ಚಿಂತೆ ಬೇಡ
ಖೂಳ ಜನರೊಡಗೂಡಿ ಕಂಗೆಡಲಿ ಬೇಡ ನೀ
ಬಾಳುವರ ಸಂಗದಲಿ ಬಾಳಿಲವೊ ಬಾಲ ॥ ೩ ॥

ಪಂಡಿತರು ಪಾಮರರು ಆರಿಗಾದರೂ ನಿನ್ನ
ಕಂಡವರಿಗೆಲ್ಲ ಕೌತುಕ ತೋರಲಿ
ಹೆಂಡಿರು ಮಕ್ಕಳು ಅಳಿಯ ಸೊಸೆ ಮೊಮ್ಮಕ್ಕಳು
ಉಂಡುಟ್ಟು ದ್ವಿಜರ ಸಹ ಗಂಡುಗಲಿಯಾಗೋ ॥ ೪ ॥

ಮಂದಮತಿಗಳ ಕೂಡೆ ಮಾತಾಡಲಿ ಬೇಡ
ನಿಂದಕರ ಕಣ್ಣೆತ್ತಿ ನೋಡಬೇಡ
ಇಂದಿರೆಯರಸ ಶ್ರೀ ವಿಜಯವಿಠ್ಠಲನ ಚರಣ
ದ್ವಂದ್ವದಲಿ ಮಸ್ತಕವ ನೀಡದಿರಬೇಡ ॥ ೫ ॥

॥ ಶ್ರೀ ಕೃಷ್ಣಾರ್ಪಣಮಸ್ತು ॥